**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.**

**ದಿಃ 20.03.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿಯಾಗಿದ್ದೇನೆ.

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ನಾನು ನನ್ನ ದಾವೆಗೆ ಸಂಬಂಧಿಸಿದಂತೆ ದಿಃ06/06/2006 ರ ನೊಂದಣಿ ಪಾಲುವಿಭಾಗ ಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.1 ಎಂದು, ಪ್ರಾಪರ್ಟಿ ರಜಿಸ್ಟರ್ ಕಾರ್ಡನ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.2 ಎಂದು, ಸಮೀರ ಉಚಿಲಾ ಇವರ ಮರಣ ಪ್ರಮಾಣಪತ್ರದ ನೋಟರಿಯವರು ದೃಢೀಕರಿಸಿದ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.3 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ನಂ.3 ರವರ ಪರ ಶ್ರೀ ಎಸ್ ಎನ್ ಪಿ ವಕೀಲರಿಂದಃ**

3 ನೇ ಪ್ರತಿವಾದಿ ನನಗೆ ಮೊಮ್ಮಗಳಾಗಬೇಕು ಎಂದರೆ ಸರಿ. ಸಮೀರ ಇವರು ನನ್ನ ಮಗ ಎಂದರೆ ಸರಿ. 2006 ನೇ ಸಾಲಿನಲ್ಲಿ ನೊಂದಣಿ ಪಾಲು ವಿಭಾಗ ಆಗಿದ್ದು ಅದು ಯಾರ ಯಾರ ನಡುವೆ ಆಗಿದೆ ಎಂದರೆ ಸಾಕ್ಷಿ ನಾನು, ನನ್ನ ಗಂಡ ಮತ್ತು ಮಗನ ನಡುವೆ ಆಗಿದೆ ಎನ್ನುತ್ತಾರೆ. ದಾವಾ ಆಸ್ತಿಯಲ್ಲಿ ನನಗೆ ಯಾವುದೇ ರೀತಿಯ ಹಕ್ಕಿಲ್ಲ ಎಂದರೆ ಸಾಕ್ಷಿ ಇದೆ ಎನ್ನುತ್ತಾರೆ. ದಾವಾ ಆಸ್ತಿಯಲ್ಲಿ ನಾನು ಜಂಟಿ ಸ್ವಾಧೀನದಲ್ಲಿ ಇಲ್ಲ ಎಂದರೆ ಸಾಕ್ಷಿ ಇಲ್ಲ ಆದರೆ ನನ್ನ ಮಗ ಮರಣ ಹೊಂದಿದ ನಂತರ ನಾನು ಆತನಿಗೆ ವಾರಸುದಾರಳಾಗುತ್ತೇನೆ ಆತನೇ ನನ್ನ ಯೋಗಕ್ಷೇಮವನ್ನು ನೋಡಿಕೊಳ್ಳುತ್ತಿದ್ದ

ಎನ್ನುತ್ತಾರೆ. ಸದರಿ ದಾವಾ ಮಾಡಲು ನನಗೆ ಯಾವುದೇ ವ್ಯಾಜ್ಯ ಕಾರಣ ಉಂಟಾಗಿಲ್ಲ ಎಂದರೆ ಸರಿಯಲ್ಲ.

**(ಪ್ರತಿವಾದಿ ನಂ.1 ಮತ್ತು 2 ರವರ ಪರ ವಕೀಲರನ್ನು ಕೂಗಿ ಕರೆಸಲಾಗಿ ಗೈರುಹಾಜರಿದ್ದು ಲಿಖಿತ ತಕರಾರು ಸಲ್ಲಿಸದಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು).**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**